# TANGA RIDE

**13-Oct-2018**

**ಪಾರಂಪರಿಕ ಟಾಂಗಾ ಸವಾರಿ ಕಾರ್ಯಕ್ರಮದ ವರದಿ**

ವಿಶ್ವವಿಖ್ಯಾತ ಮೈಸೂರು ದಸರಾ ೨೦೧೮ರ ಅಂಗವಾಗಿ ಕರ್ನಾಟಕ ಸರ್ಕಾರದ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ವತಿಯಿಂದ ದಿನಾಂಕ:೧೩.೧೦.೨೦೧೮ರಂದು ಹಮ್ಮಿಕೊಂಡಿದ್ದ **“ಪಾರಂಪರಿಕ ಟಾಂಗಾ ಸವಾರಿ”** ಕಾರ್ಯಕ್ರಮದಲ್ಲಿ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗ ಮುಖ್ಯಸ್ಥರಾದ ಪ್ರೊ. ಕೆ.ಎಸ್.ಸವಿತ ಮತ್ತು ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ಯಮುನ.ಎಂ.ಜೆ ಅವರ ನೇತೃತ್ವದಲ್ಲಿ ನಮ್ಮ ಕಾಲೇಜಿನ ಸಹಾಯಕ ಪ್ರಾಧ್ಯಾಪಕರುಗಳು ಅವರ ಕುಟುಂಬದ ಜೊತೆ ಭಾಗವಹಿಸಿದ್ದರು. ಈ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರಾದ ಸನ್ಮಾನ್ಯ ಶ್ರೀ.ಸಾ.ರಾ.ಮಹೇಶ್ ಅವರು, ಪ್ರಾಚ್ಯವಸ್ತು ಇಲಾಖೆಯ ನಿರ್ದೇಶಕರಾದ ಡಾ. ಗವಿಸಿದ್ಧಯ್ಯ, ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಎನ್.ಎಸ್.ರಂಗರಾಜು ಅವರು ಟಾಂಗಾ ಗಾಡಿಗಳಿಗೆ ಹಸಿರು ನಿಶಾನೆ ತೋರಿಸುವ ಮುಖೇಣ ಉದ್ಘಾಟಿಸಿದರು.

ಟಾಂಗಾ ಸವಾರಿಯು ಪುರಭವನದಿಂದ ಪ್ರಾರಂಭವಾಗಿ ಹತ್ತನೇ ಚಾಮರಾಜ ಒಡೆಯರ್ ವೃತ್ತ, ಅಂಬಾವಿಲಾಸ ಅರಮನೆ, ನಾಲ್ಕನೇ ಕೃಷ್ಣರಾಜ ಒಡೆಯರ್ ವೃತ್ತ, ಲ್ಯಾನ್ಸ್‌ಡೌನ್ ಕಟ್ಟಡ, ಜಗನ್ ಮೋಹನ ಅರಮನೆ, ಪರಕಾಲ ಮಠ, ಶೇಷಾದ್ರಿ ಹೌಸ್, ಪದ್ಮಾಲಯ, ಚಾಮುಂಡಿ ಅತಿಥಿ ಗೃಹ, ಪ್ರಾಚ್ಯವಿದ್ಯಾಸೌಧ, ಕ್ರಾಫರ್ಡ್ ಹಾಲ್, ಜಿಲ್ಲಾಧಿಕಾರಿಗಳ ಕಛೇರಿ, ಮಹಾರಾಜ ಕಾಲೇಜು, ಮೆಟ್ರೋಪೋಲ್ ವೃತ್ತ, ರೈಲ್ವೆ ನಿಲ್ದಾಣದ ಮೂಲಕ ಸಾಗಿ ಮೈಸೂರು ಮೆಡಿಕಲ್ ಕಾಲೇಜು ವೃತ್ತದಲ್ಲಿ ಮುಕ್ತಾಯವಾಯಿತು. ಟಾಂಗಾ ಸವಾರಿಯ ನಂತರ ನಮ್ಮ ಕಾಲೇಜನ್ನು ಪ್ರತಿನಿಧಿಸಿದ್ದ ಪ್ರೊ. ಮಂಜು ಜೆ ಹಾಗೂ ಶ್ರೀಮತಿ ಮಹಾದೇವಿ, ಪ್ರೊ. ಯಮುನ ಎಂ ಜೆ ಹಾಗೂ ಶ್ರೀ ಚಂದ್ರು, ಪ್ರೊ. ಶಾಂತಮ್ಮ ಹಾಗೂ ಶ್ರೀ ಉಮೇಶ್ ಹೆಚ್, ಶ್ರೀ ಪ್ರಸಾದ್ ಹಾಗೂ ಶ್ರೀಮತಿ ಶ್ವೇತ ಕೆ ಎಂ, ಸತಿ–ಪತಿಗಳಿಗೆ ಲಘು ಉಪಹಾರದ ವ್ಯವಸ್ಥೆಯ ಜೊತೆಗೆ ಪ್ರಮಾಣ ಪತ್ರಗಳನ್ನು ಪರಂಪರೆ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ನಿರ್ಮಲ ಮಠಪತಿಯವರು ವಿತರಿಸಿದರು.









